ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಬುಧವಾರ, ದಿನಾಂಕ : 18 ನೇ ಮಾರ್ಚ್, 2020

ರಾಜ್ಯದಲ್ಲಿ Organic Forming ಅನುಸರಿಸುತ್ತಿರುವ ರೈತರ ಹಿತ ರಕ್ಷಣೆ ಮಾಡುವ ಬಗ್ಗೆ

ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-

1184 (1370) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ Organic Forming ಪದ್ಧತಿಯನ್ನು ಅನುಸರಿಸುತ್ತಿರುವ ರೈತರ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಗಣನೆಗೆ ಇಲ್ಲದ ನೀತಿಯಿಂದ, ದುಬಾರಿ ಬೆಲೆಯ ಗೊಬ್ಬರ ಗೋಡು ಬಳಸುವಿಕೆಯಿಂದ ಹಾಗೂ ಉತ್ಪನ್ನ ವಸ್ತುಗಳಿಗೆ ವ್ಯವಸಾಯ ಮಾರುಕಟ್ಟೆ ಇಲ್ಲದೆ ಇರುವುದರಿಂದ ರೈತರು ತೊಂದರೆಗೆ ಒಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಸಂಪೂರ್ಣ ಮಾಹಿತಿ ನೀಡುವುದು ;

(ಆ) ರಾಜ್ಯದಲ್ಲಿ Organic Forming ಪದ್ಧತಿಯನ್ನು ಅನುಸರಿಸುತ್ತಿರುವ ರೈತರ ಹಿತದೃಷ್ಟಿ ಕಾಪಾಡಲು ಕೇಂದ್ರ ಮತ್ತು ರಾಜ್ಯ ಸರ್ಕಾರಗಳಿಂದ ಯಾವುದಾದರು ವಿಶೇಷ ಪ್ಯಾಕೇಜುಗಳನ್ನು ರೂಪಿಸಲಾಗಿದೆಯೇ; ಹಾಗಿದ್ದಲ್ಲಿ, ಸಂಪೂರ್ಣ ಮಾಹಿತಿ ನೀಡುವುದು;

(ಇ) ರಾಜ್ಯದಲ್ಲಿ Organic Forming ಬಗ್ಗೆ ಅರಿವು ಮೂಡಿಸಲು ಹಾಗೂ ರೈತರು ಬೆಳೆಯುವ ಬೆಳೆಗಳಿಗೆ ಉಪಯೋಗಿಸುವ ರಾಸಾಯನಿಕ ಗೊಬ್ಬರ ಮತ್ತು ಕೀಟನಾಶಕಗಳ ಬಳಕೆ ತಗ್ಗಿಸಲು, ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ರೂಪಿಸಿರುವ ಕಾರ್ಯಕ್ರಮಗಳು/ಯೋಜನೆಗಳು ಯಾವುವು ? (ಸಂಪೂರ್ಣ ಮಾಹಿತಿ ನೀಡುವುದು)